# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 143 (141) |
| **ವಿಧಾನ ಪರಿಷತ್ತಿನ ಸದಸ್ಯರ ಹೆಸರು** | : | ಶ್ರೀ ವೈ. ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ಉತ್ತರಿಸಬೇಕಾದ ದಿನಾಂಕ** | : | 17.08.2026 |
| **ಉತ್ತರಿಸುವವರು** | : | ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬಳ್ಳಾರಿ ಜಿಲ್ಲೆಯಲ್ಲಿ ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿಗಳ ಹುದ್ದೆ ಸೃಜಿಸಲಾಗಿದೆಯೇ; ಇದ್ದಲ್ಲಿ ಸದರಿ ಹುದ್ದೆಯು ಎಷ್ಟು ದಿನಗಳಿಂದ ಖಾಲಿ ಇದೆ ಪ್ರಭಾರ ಹುದ್ದೆಯ ಕರ್ತವ್ಯ ನಿರ್ವಹಿಸಲಾಗುತ್ತಿದೆ; | ಬಳ್ಳಾರಿ ಜಿಲ್ಲೆಯಲ್ಲಿ ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿಗಳ ಹುದ್ದೆಯನ್ನು ಸೃಜಿಸಲಾಗಿರುತ್ತದೆ.<br><br>ಸದರಿ ಹುದ್ದೆಯು ದಿನಾಂಕ:21.09.2022 ರಿಂದ ಖಾಲಿ ಇದ್ದು, ಪ್ರಭಾರದಲ್ಲಿ ಕಾರ್ಯ ನಿರ್ವಹಿಸಲಾಗುತ್ತಿದೆ. |
| ಆ) | ಸದರಿ ಹುದ್ದೆಯನ್ನು ಖಾಯಂ ಆಗಿ ನೇಮಕಾತಿ ಮಾಡಲು ಸರ್ಕಾರದಿಂದ ಸಾಧ್ಯವಿಲ್ಲವೇ; ಇದ್ದಲ್ಲಿ, ಸರ್ಕಾರದಿಂದ ಸದರಿ ಹುದ್ದೆಯನ್ನು ಯಾವ ಕಾಲಮಿತಿಯೊಳಗೆ ಭರ್ತಿಮಾಡಲಾಗುವುದು? | ಸಾಧ್ಯವಿದೆ.<br><br>ಪ್ರಸ್ತುತ ಆರ್ಥಿಕ ಇಲಾಖೆಯ ಸಹಮತಿ ದೊರೆತಿರುವ 06 ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಹುದ್ದೆಗಳನ್ನು ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದ್ದು, ಇನ್ನುಳಿದ ಖಾಲಿ ಹುದ್ದೆಗಳನ್ನು ಸಹ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ: ಮಮಇ 346 ಎಸ್‌ಜಿಡಿ 2026**

**(ಡಿ. ಕೆ. ಶಿವಕುಮಾರ್)**
ಮುಖ್ಯಮಂತ್ರಿ